(ಇಂದು ದಿನಾಂಕ: 19-06-2025 ರಂದು ಸಾಕ್ಷಿದಾರರನ್ನು ಕರೆಯಿಸಲಾಯಿತು, ಪ್ರಮಾಣ ವಚನ ಬೋಧಿಸಲಾಯಿತು)

**ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಿಂದ :-**

ಮುಖ್ಯ ವಿಚಾರಣೆ ಪ್ರಮಾಣ ಪತ್ರ ಸಲ್ಲಿಸಿದ್ದೇನೆ. ಪ್ರಮಾಣ ಪತ್ರದಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ.

**ಪಾಟೀ ಸವಾಲುಃ ಎದುರುದಾರರ ಪರ ವಕೀಲರಿಂದ.**

1. ನನಗೆ ಯಾವುದೇ ಗಾಯಗಳು ಆಗಿಲ್ಲ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿ ನಾನು ನನ್ನ ತಂದೆಯವರಿಗೆ ಆದ ಗಾಯದ ಬಗ್ಗೆ ಮಾತ್ರ ನಮೂದಿಸಿದ್ದೇನೆ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿರುವ ಎಲ್ಲ ವಿಷಯಗಳು ಸುಳ್ಳು ಇರುತ್ತವೆ ಎಂದರೆ ಸರಿಯಲ್ಲ.

2. ಮಹಮ್ಮದ್ ಜಾನಿಯವರಿಗೆ ಸೂಕ್ತವಾದ ಚಾಲನಾ ಪತ್ರ ಇಲ್ಲದೇ ಇರುವುದರಿಂದ ಮತ್ತು ಎದುರುದಾರ ನಂ.2 ರವರು ಲಾರಿ ನಂ.ಟಿ ಎಸ್ 07 ಯು ಇ 4797 ನೇದ್ದಕ್ಕೆ ಸಂಬಂಧಪಟ್ಟಂತೆ ಯಾವುದೇ ದಾಖಲೆಗಳನ್ನು ಸಲ್ಲಿಸದ ಕಾರಣ ಎದುರುದಾರ ನಂ.3 ಮತ್ತು 4 ಇವರು ಪರಿಹಾರ ಕೊಡಲು ಬಾದ್ಯಸ್ಥರಲ್ಲ ಎಂದರೆ ಸರಿಯಲ್ಲ. ಎದುರುದಾರರ ನಂ.2 ರವರು ಮೋ.ವಾ. ಕಾಯ್ದೆ ಮತ್ತು ವಿಮಾ ಶರತ್ತುಗಳನ್ನು ಉಲ್ಲಂಘನೆ ಮಾಡಿದ ಕಾರಣ ಎದುರುದಾರ ನಂ.3 ಮತ್ತು 4 ಇವರು ಪರಿಹಾರ ಕೊಡಲು ಬಾದ್ಯಸ್ಥರಲ್ಲ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಎದುರುದಾರ ನಂ.1 ರವರ ಪರ ವಕೀಲರಿಂದ.**

3. ಬಸ್ ಚಾಲಕನು ಸಂಚಾರಿ ನಿಯಮಗಳನ್ನು ಪಾಲಿಸಿ ಅತೀ ಜಾಗರೂಕತೆಯಿಂದ ಬಸ್ ಚಾಲನೇ ಮಾಡುತ್ತಿದ್ದ ಎಂದರೆ ಸರಿ. ಅಪಘಾತ ಲಾರಿ ಚಾಲಕನ ತಪ್ಪಿನಿಂದ ಆಗಿದೆ ಎಂದರೆ ಸರಿ. ಅಪಘಾತ ಲಾರಿಯ ವಿಮಾ ಕಂಪನಿಯವರು ಪರಿಹಾರ ಕೊಡಲು ಹೊಣೆಗಾರರು ಎಂದರೆ ಸರಿ. ಕ.ರಾ.ರ.ಸಾ.ಸ. ಬಸ್ ಚಾಲಕ ಜಾಗರೂಕತೆಯಿಂದ ಬಸ್ ಚಾಲನೆ ಮಾಡಿದ್ದರಿಂದ ಸಂಸ್ಥೆ ಪರಿಹಾರ ಕೊಡಲು ಹೊಣೆಗಾರ ಅಲ್ಲ ಎಂದರೆ ಸರಿ. ಬಸ್ ಚಾಲಕನ ತಪ್ಪು ಇರದೇ ಇದ್ದರು ಅವರನ್ನು ತಪ್ಪಾಗಿ ಪಕ್ಷಗಾರರನ್ನಾಗಿ ಮಾಡಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯನ್ನು ವಿಚಾರಿಸಿ ನಂತರ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ. ಸರಿ ಇದೆ,

ಸಹಿ/-
ಹಿರಿಯ ಸಿವಿಲ್ ನ್ಯಾಯಾಧೀಶರು,
ಸಿಂಧನೂರು